ದಿನಾಂಕ: 08.03.2021 ರಂದು ಬೆಳಗ್ಗೆ 10.30 ಗಂಟೆಗೆ ಕಾಮಾಕ್ಷಿಪಾಳ್ಯ ವಾರ್ಡ್ ನಂ. 101 ರಲ್ಲಿ ಶ್ರೀ ಎ.ಎಸ್. ರಮೇಶ್, ಜೋನಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು:-**

1. ಶ್ರೀ ಎ.ಎಸ್. ರಮೇಶ್, ಜೋನಲ್ ಅಧಿಕಾರಿಗಳು
2. ಶ್ರೀ ಸೋಮಶೇಖರ್ ಸಹಾಯಕ ಅಭಿಯಂತರರು, (ಪ್ರಭಾರ) ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ
3. ಶ್ರೀಮತಿ ದೀಪಾ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
4. ಶ್ರೀ ಶೇಖರ್ ನಾಯಕ್, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
5. ಶ್ರೀ ಬಿ.ಎ. ಶಂಕರ್ ನಾಯಕ್, ಸಹಾಯಕ ಅಭಿಯಂತರರು, ಬೆಸ್ಕಾಂ
6. ಶ್ರೀ ಸಿದ್ದರಾಜು, ಸಹಾಯಕ ಅಭಿಯಂತರರು, ಬೆಸ್ಕಾಂ
7. ಶ್ರೀಮತಿ ರಾಜೇಶ್ವರಿ, ಹಿರಿಯ ಆರೋಗ್ಯ ಪರಿವೀಕ್ಷಕರು
8. ಶ್ರೀ ರಮೇಶ್, ಪಶು ಸಂಗೋಪನ ಇಲಾಖೆ, ನಿರೀಕ್ಷಕರು
9. ಶ್ರೀ ವೆಂಕಟೇಶ್, ಕಂದಾಯ ಇಲಾಖೆ
10. ಶ್ರೀಮತಿ ರೂಪಾ, ಕಿರಿಯ ಆರೋಗ್ಯ ಪರಿವೀಕ್ಷಕರು
11. ಶ್ರೀ ಅನಿಲ್ ರಂಗಣ್ಣ, ಸದಸ್ಯರು,
12. ಶ್ರೀ ಶ್ರೀನಿವಾಸ್.ಎ. ಸದಸ್ಯರು
13. ಶ್ರೀ ಗಂಗಯ್ಯ, ಸದಸ್ಯರು
14. ಶ್ರೀ ರವೀಂದ್ರನಾಥ್, ಸದಸ್ಯರು
15. ಶ್ರೀ ರಾಜೇಶ್.ಎಂ. ಸದಸ್ಯರು
16. ಶ್ರೀ ಮಾರುತಿ.ಬಿ.ಹೆಚ್. ಸದಸ್ಯರು
17. ಶ್ರೀ ಸುಬ್ರಮಣ್ಯ, ಸದಸ್ಯರು

ದಿನಾಂಕ: 20.02.2021 ರಂದು ನಡೆದ ಸಭೆಯಲ್ಲಿ ಹಲವಾರು ವಿಷಯಗಳನ್ನು ಚರ್ಚಿಸಿ, ಅದಕ್ಕೆ ಸಂಬಂಧಪಟ್ಟ ವಿಷಯಗಳಿಗೆ ಪರಿಹಾರ ತೆಗೆದುಕೊಳ್ಳಲಾಗಿರುತ್ತದೆ. ಹಾಗು ದಿನಾಂಕ: 08.03.2021ರಂದು ಬೆಳಗ್ಗೆ10.30 ಗಂಟೆಗೆ ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ ಎಸ್.ಬಿ.ಐ. ಆಫೀರರ್ಸ್ ಸಮುಧಾಯ ಭವನ, ಎಸ್.ಬಿ.ಐ. ಕಾಲೋನಿ, ಬಸವೇಶ್ವರನಗರ, ಕಾಮಾಕ್ಷಿಪಾಳ್ಯ, ಇಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ಕಮಿಟಿಯ ಸದಸ್ಯರುಗಳು ಮಾತನಾಡುತ್ತಾ, ಕಾಮಾಕ್ಷಿಪಾಳ್ಯ ವ್ಯಾಪ್ತಿಯಲ್ಲಿ ಬೆಸ್ಕಾಂ ವತಿಯಿಂದ ಕೇಬಲ್ ಅಳವಡಿಸಲು ಸುಮಾರು 25 ಕಡೆ ರಸ್ತೆಯಲ್ಲಿ ಗುಂಡಿಗಳನ್ನು ತೋಡಿ ಸುಮಾರು 4 ತಿಂಗಳು ಕಳೆದರೂ ಸಹ ಕಾಮಗಾರಿಯನ್ನು ಪೂರ್ಣಗೊಳಿಸದೆ ಹಾಗೆಯೇ ಬಿಟ್ಟಿರುವುದರಿಂದ ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗುತ್ತಿದ್ದು, ಮತ್ತು ಇದರಿಂದ ಪ್ರಾಣ ಹಾನಿಯಾಗುವ ಸಂಭವವಿರುತ್ತದೆ ಎಂದು ಸಭೆಗೆ ತಿಳಿಸಿದರು. ಇದಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಸಹಾಯಕ ಅಭಿಯಂತರರಾದ ಶ್ರೀ ಸಿದ್ದರಾಜು ರವರು ಮುಂದಿನ ಸಭೆಯೊಳಗೆ ಗುಂಡಿಗಳನ್ನು ಮುಚ್ಚಿ ಸಾರ್ವಜನಿಕರಿಗೆ ಓಡಾಡಲು ಅನುಕೂಲ ಮಾಡಿಕೊಡುವುದಾಗಿ ಸಭೆಗೆ ತಿಳಿಸಿದರು.
2. ಸಭೆಯಲ್ಲಿ ಹಾಜರಿದ್ದ ಹಿರಿಯ ನಾಗರೀಕರು ಮಾತನಾಡುತ್ತಾ, ಕೋವಿಡ್ ಲಸಿಕೆಯನ್ನು ಪಡೆಯಲು ಹೆಸರನ್ನು ನೋಂದಾಯಿಸಲು ಯಾವ ರೀತಿ ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ಕೋರಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರು ಕೋವಿಡ್ ಲಸಿಕೆ ಪಡೆಯಲು ಹೆಸರನ್ನು ಹೇಗೆ ನೋಂದಾಯಿಸಬೇಕೆಂದು ಸಭೆಗೆ ವಿವರಿಸಿದರು.
3. ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, ರಾಷ್ಟ್ರೋತ್ಥಾನ ಶಾಲೆ , ಮ್ಯಾಕ್ಸ್ ಮುಲ್ಲರ್ ಶಾಲೆ ಮತ್ತು ಹೌಸಿಂಗ್ ಬೋರ್ಡ್ ಕಾಲೋನಿ ಹತ್ತಿರವಿರುವ ಉಧ್ಯಾನವನದ ಸುತ್ತ ಮುತ್ತ , ಗಾಡಿ ಮುದ್ದಣ್ಣ ರಸ್ತೆಗಳಿಗೆ ನಾಯಿಗಳ ಹಾವಳಿ ಜಾಸ್ತಿಯಾಗಿದ್ದು, ರಸ್ತೆಯಲ್ಲಿ ಓಡಾಡಲು ತೊಂದರೆಯಾಗುತ್ತಿರುವುದಾಗಿ ಸಭೆಗೆ ತಿಳಿಸಿದರು. ಇದಕ್ಕೆ ಉತ್ತರವಾಗಿ ಪಶು ಸಂಗೋಪನ ಇಲಾಖೆ, ಹಿರಿಯ ನಿರೀಕ್ಷಕರು ರವರು ಮಾತನಾಡುತ್ತಾ, ಸದರಿ ಸ್ಥಳಗಳಲ್ಲಿ ನಾಯಿಗಳನ್ನು ಹಿಡಿಯಲು ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

ಪು.ತಿ.ನೋ.

Scanned by CamScanner

4. ಸಭೆಯಲ್ಲಿ ಹಾಜರಿದ್ದ ಹಿರಿಯ ನಾಗರೀಕರು ಮಾತನಾಡುತ್ತಾ, 1ನೇ ಮುಖ್ಯ ರಸ್ತೆಯಲ್ಲಿ ರಸ್ತೆ ಗುಂಡಿಗಳು ಬಿದ್ದಿರುವುದರಿಂದ ಸದರಿ ರಸ್ತೆಯನ್ನು ದುರಸ್ಥಿಗೊಳಿಸಬೇಕಾಗಿ ಸಭೆಯಲ್ಲಿ ಕೋರಿದರು. ಇದಕ್ಕೆ ಉತ್ತರವಾಗಿ ವಾರ್ಡ್ ಸಹಾಯಕ ಅಭಿಯಂತರರು, ಮಾತನಾಡುತ್ತಾ, ಸದರಿ ರಸ್ತೆಯನ್ನು ಈಗಾಗಲೇ ಡಾಂಬರೀಕರಣ ಮಾಡಲು ಕ್ರಮ ಕೈಗೊಳ್ಳಲಾಗಿದ್ದು, ಕಾಮಗಾರಿಯನ್ನು 15 ದಿನಗಳೊಳಗಾಗಿ ಪೂರ್ಣಗೊಳಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.
5. ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಮಾತನಾಡುತ್ತಾ, ಗಾಡಿ ಮುದ್ದಣ್ಣ ರಸ್ತೆಯಲ್ಲಿ ಸುಮಾರು 4 ತಿಂಗಳುಗಳಿಂದ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಸಬ್‌ಲೈನ್ ವತಿಯಿಂದ ಕಾಮಗಾರಿಯನ್ನು ಪೂರ್ಣಗೊಳಿಸದೇ ಇರುವುದರಿಂದ ಸ್ಥಳೀಯ ನಿವಾಸಿಗಳು ಹಾಗೂ ಸಾರ್ವಜನಿಕರಿಗೆ ಓಡಾಡಲು ಕಷ್ಟಕರವಾಗುತ್ತಿದ್ದು, ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಅನೇಕ ಬಾರಿ ದೂರು ನೀಡಿದರು ಸಹ ಯಾವುದೇ ಕ್ರಮವನ್ನು ಕೈಗೊಂಡಿರುವುದಿಲ್ಲವೆಂದು ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಶ್ರೀಮತಿ ದೀಪಾ, ಸಹಾಯಕ ಅಭಿಯಂತರರು ಮಾತನಾಡುತ್ತಾ, ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು ಗುತ್ತಿಗೆದಾರರಿಗೆ ಈಗಾಗಲೇ ಗಡುವು ವಿಧಿಸಲಾಗಿದ್ದು, ಗುತ್ತಿಗೆದಾರರು ಸದರಿ ಅವಧಿಯಲ್ಲಿ ಪೂರ್ಣಗೊಳಿಸದೆ ಇದ್ದಲ್ಲಿ ದಂಡ ವಿಧಿಸಲು ಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ತಿಳಿಸಿದರು.
6. ಶ್ರೀ ರಾಘವ್, ಸಾರ್ವಜನಿಕರು ಮಾತನಾಡುತ್ತಾ, ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಬ್‌ಲೈನ್ ವತಿಯಿಂದ ಕಾಮಗಾರಿಯನ್ನು ಪೂರ್ಣಗೊಳಿಸಿ, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ರಸ್ತೆಗೆ ಹಾಕಿರುವ ಕಾಂಕ್ರೀಟ್ ಕಿತ್ತು ಬರುತ್ತಿರುವುದರಿಂದ ಹಾಗೂ ದೂಳು ಬರುತ್ತಿರುವುದರಿಂದ ಸ್ಥಳೀಯ ನಿವಾಸಿಗಳಿಗೆ ತೊಂದರೆಯಾಗುತ್ತಿರುವುದಾಗಿ ಸಭೆಗೆ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಹಾಯಕ ಅಭಿಯಂತರರು ಸದರಿ ರಸ್ತೆಯನ್ನು ಗುತ್ತಿಗೆದಾರರೊಂದಿಗೆ ಪರಿಶೀಲಿಸಿ, ದುರಸ್ಥಿಪಡಿಸಿ, ಅಗತ್ಯ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.
7. ಶಾರದಾ ಕಾಲೋನಿ 1ನೇ ಜೆ ಕ್ರಾಸ್, ಜಲಮಂಡಳಿಯ ನೀರು ಸರಿಯಾಗಿ ಬರುತ್ತಿರುವುದಿಲ್ಲವೆಂದು ಸಭೆಗೆ ಸಾರ್ವಜನಿಕರು ತಿಳಿಸಿದರು. ಇದಕ್ಕೆ ಉತ್ತರವಾಗಿ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರು ಪರಿಶೀಲಿಸಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.
8. ಸಭೆಯಲ್ಲಿ ಹಾಜರಿದ್ದ ಹಿರಿಯ ನಾಗರೀಕರು ಒಬ್ಬರು ಎಸ್.ಬಿ.ಐ. ಕಾಲೋನಿ ಸುತ್ತ ಮುತ್ತ ಸುಮಾರು 15 ದಿನಗಳಿಂದ ಆಗಿಂದಾಗೆ ವಿದ್ಯುತ್ ಕಡಿತಗೊಳಿಸುತ್ತಿರುವುದರಿಂದ ತೊಂದರೆಯಾಗುತ್ತಿರುವುದಾಗಿ ತಿಳಿಸಿದರು ಮತ್ತು ವಿದ್ಯುತ್ ಕಡಿತಗೊಳಿಸುವ ಮುಂಚಿತವಾಗಿ ಸ್ಥಳೀಯ ನಿವಾಸಿಗಳಿಗೆ ಮಾಹಿತಿ ನೀಡಿದಲ್ಲಿ ಅನುಕೂಲವಾಗುತ್ತದೆ ಎಂದು ಅಭಿಪ್ರಾಯ ಪಟ್ಟರು. ಈ ವಿಷಯದ ಬಗ್ಗೆ ಸಹಾಯಕ ಅಭಿಯಂತರರು, ಬೆಸ್ಕಾಂ ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೇಬಲ್ ಅಳವಡಿಸುವ ಕಾಮಗಾರಿ ಪ್ರಗತಿಯಲ್ಲಿರುವುದರಿಂದ ವಿದ್ಯುತ್ ಕಡಿತಗೊಳಿಸಲಾಗುತ್ತಿದ್ದು, 3-4 ದಿನಗಳಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದೆಂದು ಸಭೆಗೆ ತಿಳಿಸಿದರು.

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ-101

ನೋಡಲ್ ಅಧಿಕಾರಿಗಳು
ವಾರ್ಡ್ ನಂ. 101

Scanned by CamScanner